ಮೈಸೂರ ಗೆಜೆಟ್ಟ

ಸರ್ಕಾರದಿಂದ ಪ್ರಾಯಿಷ್ ಆದ್ದು.

ಬೆಂಗಳೂರು, ಶನಿವಾರ, ಸೆಪ್ಟಂಬರ್ ತಾ॥ 24, ಸ್ರ್ 1887.

ಗಜೆಟ್ ಈ ಭಾಗವನ್ನು ಪ್ರತ್ಯೇಕ ಶೇರಿಸಿ ಇಡುವ ಬಗ್ಯೆ ಇದಕ್ಕೆ ಬೇರೆಯಾಗಿ ಪುಟ ಸಂಖ್ಯೆ ಕೊಡಲ್ಪಡುತ್ತೆ.

೨ನೇ ಭಾಗ.

ಇಂಡ್ಯಗವರ್ನಮೆಂಟ್, ರೆಸಿಡೆಂಟರು, ಜೀಫ್ ಜಡ್ಜ್ಗೀರು, ವಗ್ಯೆರೇರಿಂದ ಕೊಡೋಣಾದ ಇಸ್ತಿಹಾರ್ನಾಮೆಗಳು.

ಅಂಬಕೇ ಇಲಾಖಾ.

ನಂ. 294—169. ತಾರೀಖು 21ನೇ ಸೆಪ್ಟಂಬರ್ 1887.

ಇದರಿಂದ ಸಕಲ ಜನಗಳಿಗೂ ತಿಳಿಯುವ ಬಗ್ಯೆ ಪ್ರಕಟಿಸಲ್ಪಡುವದೇನಂದರೆ, ಮೈಸೂರ ಶ್ರೀಮ್ಮ ಮಹಾರಾಜ ರಾಜಾಸಾಹೇಬ್ ಬಹದೂರವರ, ದಿವಾಣರವರ ಅಪ್ಪಣೇ ಅನುಸರಿಸಿ ಈ ಕೆಳಗೆ ಕಂಡ ಸ್ಥಳಗಳೊಳಗೆ ಹೋಬಳೀ ಅಂಚೇ ಆಫೀಸ್‌ಗಳು ಸ್ಥಾಪಿಸಲ್ಪಟ್ಟಿರುತ್ತೆ.

ತಾಲ್ಲೂಕು.		ಅಂಚೇ ಆಫೀಸ್ ಸ್ಥಾಪಿಸಲ್ಪಟ್ಟ ಸ್ಥಳಗಳ ಹೆಸರು.
ನಾಗಮಂಗಲ	..	ಹೊನ್ನೇನಹಳ್ಳಿ
ಮಾಲೂರು	..	ಲಕ್ಕೂರು
ಅರಕಲಗೂಡು	..	ಪುರವೂರು

ಬಿ. ಮರಿಗಂಗಯ್ಯ,
ಅಂಚೇ ಬಕ್ಷಿ.

ಬೆಂಗಳೂರು ಡಿಸ್ಟ್ರಿಕ್ಟ್.

ಬೆಂಗಳೂರು ಸಬ್ ಜಡ್ಜ್ಗೀಯವರ ಕೋರ್ಟ್‌ನಲ್ಲಿ.

1887ನೇ ಇಸವಿ ಮಿಸ್ಕೆ ಅರ್ಜೀ ನಂಬರ್ 746.

ತುಮಕೂರು ಡಿ॥ ಚಿಕ್ಕನಾಯಿಕನಹಳ್ಳಿಲಿದ್ದು ಮೃತಪಟ್ಟ ಅಕ್ಕಸಾಲಿಗರ ನಂಜುಂಡಯ್ಯನ ಆಸ್ತೀ ವಿಷಯದಲ್ಲಿ—

ಅರ್ಜೀದಾರ್ರು ಚಿಕ್ಕನಾಯಿಕನಹಳ್ಳೀಲಿರುವ ಮಲ್ಲಯ್ಯ ಮೈನರ್ ತಾಯಿ ಲಿಂಗಮ್ಮ ಮೃತಪಟ್ಟ ಸದರೀ ನಂಜುಂಡಯ್ಯನಿಗೆ ಮಗ ಆಗಬೇಕೆಂಬ ಹಕ್ಕುದಾರೀ ಮೇಲೆ ಚಿಕ್ಕನಾಯಿಕನಹಳ್ಳಿ ಸ್ಥಳದ ಮಲ್ಲಯ್ಯ ಮೈನರ್ ತಾಯಿ ಲಿಂಗಮ್ಮ ಸದರೀ ವಾಸಸ್ಥರಾಗಿ ಮೃತ ಪಟ್ಟ ನಂಜುಂಡಯ್ಯನ ಜಿಂದಗೀ ಬಗ್ಯಾಗಿ ಬರತಕ್ಕ ಸಾಲಗಳನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ, 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟ್‌ಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಮಲ್ಲಯ್ಯ ಮೈನರ್ ತಾಯಿ ಲಿಂಗಮ್ಮನ ಅರ್ಜೀಯನ್ನು 1887ನೇ ಇಸವಿ ಅಕ್ಟೋಬರ್ ತಿಂಗಳು ತಾರೀಖು 7ರಲ್ಲು ಕೇಳಿ ಸರಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಕೀ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ನಂಜುಂಡಯ್ಯನ ಆಸ್ತಿಗೆ ಹಕ್ಕುದಾರರಾದ ವಿಸಿಪ್ಪರೂ ಈ ಕೋರ್ಟ್‌ನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಯಿದೆ.

1887ನೇ ಇಸವಿ ಸೆಪ್ಟಂಬರ್ ತಿಂಗಳು 15ನೇ ತಾರೀಖಿನಲ್ಲಿ ಕೋರ್ಟು ಮೊಹರ್‌ನಿಸಿ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

126

1887ನೇ ಇಸವಿ ಮಿ|| ಅರ್ಜೀ ನಂಬರ್ 765.

ತುಮಕೂರು ತಾಲ್ಲೂಕು ಬೇಜೂರು ಸಮ್ಮತು ಬನ್ನಿಕುಪ್ಪೆಲಿದ್ದ ಮೃತಪಟ್ಟ ರಂಗೇಗೌಡನವರ ಆಸ್ತೀ ವಿಷಯದಲ್ಲಿ—

ಅರ್ಜೀದಾರು ರಂಗೇಗೌಡ ಮೈನರ್ ತಾಯಿ ನಂಜಮ್ಮ ಮೃತಪಟ್ಟ ಸದರೀ ರಂಗೇಗೌಡರ ಮಗ ಆಗಬೇಕೆಂಬ ಹಕ್ಕುದಾರೀ ಮೇಲೆ ಬನ್ನಿಕುಪ್ಪೆ ಸ್ಥಳದ ರಂಗೇಗೌಡ ಮೈನರ್ ತಾಯಿ ನಂಜಮ್ಮ ಡಿಟೋ ವಾಸಸ್ಥರಾಗಿ ಮೃತಪಟ್ಟ ರಂಗೇಗೌಡರ ಜಿಂದಗೀ ಬಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ರಂಗೇಗೌಡ ಮೈನರ್ ತಾಯಿ ನಂಜಮ್ಮನ ಅರ್ಜೀಯನ್ನು 1387ನೇ ಇಸವಿ ಅಕ್ಟೋಬರ್ ತಿಂಗಳು ತಾರೀಖು 7ರಲ್ಲು ಕೇಳಿ ಸರಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೀ ಮಾಡಲ್ಪಟ್ಟಿತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ರಂಗೇಗೌಡರ ಆಸ್ತಿಗೆ ಹಕ್ಕುದಾರರಾದ ವಿಸಿಷ್ಯರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1887ನೇ ಇಸವಿ ಸೆಪ್ಟಂಬರ್ ತಿಂಗಳು 16ನೇ ತಾರೀಖಿನಲ್ಲಿ ಕೋರ್ಟು ಮೊಹರಿನಿಸಿ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

ಸಿ. ಕ್ರೈಸ್,
ಸಬ್ ಜಡ್ಜ್.

ಮೈಸೂರು ಡಿಸ್ಟ್ರಿಕ್ಟು.

ಮೈಸೂರು ಡಿಸ್ಟ್ರಿಕ್ಟು ಜಡ್ಜೀಯವರ ಕೋರ್ಟಿನಲ್ಲಿ.

1887ನೇ ಇಸವಿ ಅರ್ಜೀ ನಂಬರ್ 484.

ಮೃತಪಟ್ಟ ಭರಮಂಣನವರ ಆಸ್ತೀ ವಿಷಯದಲ್ಲಿ—

ಅರ್ಜೀದಾರ ಕರಡೀ ಅನಂತಪ್ಪನವರು ಮೃತಪಟ್ಟ ಸದರೀ ಭರಮಂಣನವರಿಗೆ ಸಹೋದರ ಆಗಬೇಕೆಂಬ ಹಕ್ಕುದಾರೀ ಮೇಲೆ ಮೈಸೂರು ಸ್ಥಳದ ಸದರೀ ಕರಡೀ ಅನಂತಪ್ಪನವರು ಚನ್ನರಾಯಪಟ್ಟಣದ ತಾಲ್ಲೂಕು ಬೆಳಗೊಳದ ವಾಸಸ್ಥನಾಗಿ ಮೃತಪಟ್ಟ ಭರಮಂಣನವರ ಜಿಂದಗೀ ಬಗ್ಯಾಗಿ ಬರತಕ್ಕ 5,000 ರೂಪಾಯಿ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಕರಡೀ ಅನಂತಪ್ಪನವರ ಅರ್ಜೀಯನ್ನು 1887ನೇ ಇಸವಿ ಅಕ್ಟೋಬರ್ ತಿಂಗಳು ತಾರೀಖು 10ರಲ್ಲು ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೀ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಭರಮಂಣನವರ ಆಸ್ತಿಗೆ ಹಕ್ಕುದಾರರಾದ ವಿಸಿಷ್ಯರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1887ನೇ ಇಸವಿ ಅರ್ಜೀ ನಂಬರ್ 499.

ಮೃತಪಟ್ಟ ದುಂಡೇಗವ್ವಡರ ಆಸ್ತೀ ವಿಷಯದಲ್ಲಿ—

ಅರ್ಜೀದಾರ 1ನೇ ನಂಜೇಗವ್ವಡ 2ನೇ ದುಂಡೇಗವ್ವಡ 3ನೇ ಮಾದೇಗವ್ವಡ 2—3ನೇ ಮೈನರ್ ಗಾರ್ಡಿಯರ್ಸ್ ತಾಯಿ ಮಾದಮ್ಮ ಮೃತಪಟ್ಟ ಸದರೀ ದುಂಡೆಗವ್ವಡಿಗೆ ಮಕ್ಕಳು ಹೆಂಡತಿ ಆಗಬೇಕೆಂಬ ಹಕ್ಕುದಾರೀ ಮೇಲೆ ಚಾಮರಾಜನಗರ ತಾಲ್ಲೂಕು ಸಂತೆಮರಹಳ್ಳಿ ಸ್ಥಳದ ಸದರೀ 1ನೇ ನಂಜೇಗವ್ವಡ ಮಾದಮ್ಮನೂ ಸಹ ಸದರೀ ವಾಸಸ್ಥನಾಗಿ ಮೃತಪಟ್ಟ ದುಂಡೇಗವ್ವಡರ ಜಿಂದಗೀ ಬಗ್ಯಾಗಿ ಬರತಕ್ಕ 900 ರೂಪಾಯಿ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ನಂಜೇಗವ್ವಡ, ಮಾದಮ್ಮ ಇವರ ಅರ್ಜೀಯನ್ನು 1887ನೇ ಇಸವಿ ಅಕ್ಟೋಬರ್ ತಿಂಗಳು ತಾರೀಖು 14ರಲ್ಲು ಕೇಳಿ ಸರಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೀ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ದುಂಡೇಗವ್ವಡರ ಆಸ್ತಿಗೆ ಹಕ್ಕುದಾರರಾದ ವಿಸಿಷ್ಯರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1887ನೇ ಇಸವಿ ಸೆಪ್ಟಂಬರು ತಿಂಗಳು 12ನೇ ತಾರೀಖಿನಲ್ಲಿ ಕೋರ್ಟು ಮೊಹರಿನಿಸಿ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.